☎ 0836 - 2224098, 2224195
2224301, 2222616
2224274, 2222505

# ಹುಬ್ಬಳ್ಳಿ – ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ

**ನವನಗರ, ಹುಬ್ಬಳ್ಳಿ – 580 025**

ಕ್ರ.ಸಂ.: ಹು.ಧಾ.ನ.ಪ್ರಾ : ಅ.ವಿ/ತಡಸಿನಕೊಪ್ಪ/ಟಾ.ವಿ/2023-24 | 2953

ದಿನಾಂಕ : 31 -~~09~~ 10 -2023

ವಿಷಯ : ಧಾರವಾಡ ತಾ॥ ತಡಸಿನಕೊಪ್ಪ ಗ್ರಾಮದ ಬ್ಲಾಕ ನಂ 17/2 ನೇದ್ದರ ಕ್ಷೇತ್ರ 11ಎ–00ಗು ಪ್ರದೇಶದ ವಸತಿ ಉದ್ದೇಶದ ವಿನ್ಯಾಸದ ಅಭಿವೃದ್ಧಿ ಕಾಮಗಾರಿಗಳ ಮುಕ್ತಾಯ ಪ್ರಮಾಣ ಪತ್ರ ನೀಡುವ ಕುರಿತು.

ಉಲ್ಲೇಖ : ಈ ಕಚೇರಿ ಪತ್ರ ಸಂಖ್ಯೆ: ಹು.ಧಾ.ನ.ಪ್ರಾ/ಅ.ವಿ/ತಡಸಿನಕೊಪ್ಪ/6583 ದಿನಾಂಕ : 09–11–2015

ಪೀಠಿಕೆ :

: ಧಾರವಾಡ ತಾ॥ ತಡಸಿನಕೊಪ್ಪ ಗ್ರಾಮದ ಬ್ಲಾಕ ನಂ 17/2 ನೇದ್ದರ ಕ್ಷೇತ್ರ 11ಎ–00ಗು ಪ್ರದೇಶದ ವಸತಿ ಉದ್ದೇಶದ ವಿನ್ಯಾಸವನ್ನು ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಶ್ರೀ ಜಹಾಂಗೀರ ನೋಹಾ ಶೇಖ, ಮಿಡ್ ಮಾರ್ಕ ಡೆವಲಪರ್ಸ್, ಜಿ ಮುಪ್ಪಣ್ಣ ಕಾಂಪ್ಲೇಕ್ಸ್, 1ನೇ ಮಹಡಿ, ಹುಬ್ಬಳ್ಳಿ ಇವರು ಪ್ರಾಧಿಕಾರದಿಂದ ತಿಳಿಸಲಾದ ಮೇಲ್ವಿಚಾರಣಾ ಶುಲ್ಕ ಸಂದಾಯ ಮಾಡಿ ಪರವಾನಿಗೆ ಪಡೆದುಕೊಂಡು ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ರಸ್ತೆ ನಿರ್ಮಾಣ, ಡಾಂಬರೀಕರಣ, ಅಡ್ಡಗಾಲುವೆಗಳು, ಗಟಾರ ನಿರ್ಮಾಣ, ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವರು. ವಿದ್ಯುತ್ ಕಾಮಗಾರಿಗಳನ್ನು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ ಇವರ ಮೇಲ್ವಿಚಾರಣೆಯಲ್ಲಿ ಕೈಗೊಂಡಿರುವರು. ದಿ : 08–09–2023 ರಂದು ಪ್ರಾಧಿಕಾರದ ಕಾರ್ಯನಿರ್ವಾಹಕ ಅಭಿಯಂತರರು ಹಾಗೂ ಇತರೇ ತಾಂತ್ರಿಕ ವರ್ಗದವರು ವಸತಿ ವಿನ್ಯಾಸದಲ್ಲಿಯ ಅಭಿವೃದ್ಧಿ ಕಾಮಗಾರಿಗಳನ್ನು ಪರಿವೀಕ್ಷಿಸಿ, ವಸತಿ ವಿನ್ಯಾಸದ ಅಭಿವೃದ್ಧಿ ಕಾಮಗಾರಿಗಳನ್ನು ತೃಪ್ತಿಕರವಾಗಿ ಮಾಡಿರುವುದಾಗಿ ವರದಿ ಸಲ್ಲಿಸಿರುವರು.

## ಪ್ರಾಧಿಕಾರದ ಆದೇಶ

ಧಾರವಾಡ ತಾ॥ ತಡಸಿನಕೊಪ್ಪ ಗ್ರಾಮದ ಬ್ಲಾಕ ನಂ 17/2 ನೇದ್ದರ ಕ್ಷೇತ್ರ 11ಎ–00ಗು ಪ್ರದೇಶದ ವಸತಿ ಉದ್ದೇಶದ ವಿನ್ಯಾಸವನ್ನು ಮಹಾನಗರ ಪಾಲಿಕೆಗೆ ಹಸ್ತಾಂತರಿಸುವ ಪೂರ್ವದಲ್ಲಿ ಈ ಕೆಳಗೆ ತಿಳಿಸಿದ ಕರಾರುಗಳಿಗೆ ಒಳಪಟ್ಟು ಮುಕ್ತಾಯ ಪ್ರಮಾಣ ಪತ್ರ ನೀಡಲಾಗಿದೆ.

1. ಮಹಾನಗರ ಪಾಲಿಕೆಗೆ ವಸತಿ ಉದ್ದೇಶದ ವಿನ್ಯಾಸ ಹಸ್ತಾಂತರ ಆಗುವವರೆಗೆ ನಿವೇಶನದಾರರಿಗೆ ನೀರು ಸರಬರಾಜು ಮಾಡಲು ಕ್ರಮ ಕೈಕೊಳ್ಳಬೇಕು.
2. ಮಹಾನಗರ ಪಾಲಿಕೆಯ ನಿರ್ದೇಶನದಂತೆ ವಿದ್ಯುತ್ ಕಂಬಗಳಿಗೆ ಬೀದಿ ದೀಪಗಳನ್ನು ಅಳವಡಿಸುವುದು.
3. ಕಸದ ತೊಟ್ಟಿ ಅಳವಡಿಸುವ ಕುರಿತಾಗಿ ಮಹಾನಗರ ಪಾಲಿಕೆ ಸೂಚಿಸಿದಂತೆ ಕ್ರಮ ಕೈಕೊಳ್ಳುವುದು.
4. ನೀರು ಸರಬರಾಜು ಹಾಗೂ ಒಳಚರಂಡಿ ಕಾಮಗಾರಿ ಕುರಿತು ಮುಖ್ಯ ಕೊಳವೆ ಲಭ್ಯವಾದಾಗ ಜೋಡಣೆ ಮಾಡಲು ಪಾಲಿಕೆಯ ಪರವಾನಿಗೆ ಪಡೆದು ವಿನ್ಯಾಸದಾರರು ತಮ್ಮ ಸ್ವಂತ ಖರ್ಚಿನಲ್ಲಿ ಜೋಡಣೆ ಮಾಡಿಕೊಡುವುದು.
5. ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯವರು ಸೂಚಿಸುವ ಯಾವುದೇ ಕಾಮಗಾರಿಗಳಲ್ಲಿಯ ದೋಷಗಳನ್ನು ವಿನ್ಯಾಸದಾರರು ತಮ್ಮ ಸ್ವಂತ ಖರ್ಚಿನಿಂದ ಮಾಡಿಸುವುದು.
6. ನೀರು ಸರಬರಾಜು ಹಾಗೂ ಒಳಚರಂಡಿ ಕಾಮಗಾರಿಗಳಿಗೆ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯವರು ನಿರ್ಧರಿಸುವ ಪ್ರೋರೇಟಾ ಮೊತ್ತವನ್ನು ವಿನ್ಯಾಸದಾರರು ತುಂಬುವುದು.
7. ಮಹಾನಗರ ಪಾಲಿಕೆಯವರು ಸೂಚಿಸುವ ಇನ್ನಿತರ ಕಾಮಗಾರಿಗಳನ್ನು ವಿನ್ಯಾಸದಾರರು ಮಾಡುವುದು.

8. ಸದರಿ ವಸತಿ ಉದ್ದೇಶದ ವಿನ್ಯಾಸದಲ್ಲಿಯ ನಿವೇಶನದಾರರು ತಾವು ಕಟ್ಟಲಿರುವ ಕಟ್ಟಡಗಳಿಗೆ ಮಹಾನಗರ ಪಾಲಿಕೆಯಿಂದ ಪರವಾನಿಗೆ ಪಡೆಯತಕ್ಕದ್ದು.

9. ಪಾಲಿಕೆ ತಿಳಿಸುವ ಅವಧಿಯವರೆಗೆ ವಸತಿ ಉದ್ದೇಶದ ವಿನ್ಯಾಸದಲ್ಲಿಯ ಮೂಲಭೂತ ಸೌಕರ್ಯಗಳ ನಿರ್ವಹಣೆಯನ್ನು ವಿನ್ಯಾಸದಾರರು ಮಾಡುವುದು.

10. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ತಿದ್ದುಪಡಿ ಕಲಂ 17 (2ಎ) ರನ್ವಯ ಸದರಿ ವಿನ್ಯಾಸಕ್ಕೆ ಅಂತಿಮ ಅನುಮೋದನೆಯನ್ನು ಪ್ರಾಧಿಕಾರದಿಂದ ಪಡೆಯುವ ಶರತ್ತಿಗೆ ಒಳಪಟ್ಟು ಮುಕ್ತಾಯ ಪ್ರಮಾಣ ಪತ್ರ ನೀಡಲಾಗಿದೆ.

ಆಯುಕ್ತರು,
ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ,
ಹುಬ್ಬಳ್ಳಿ

ಸದರ ಪ್ರತಿಯನ್ನು ಆದರಪೂರ್ವಕವಾಗಿ :

1. ಆಯುಕ್ತರು, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ, ಹುಬ್ಬಳ್ಳಿ ಇವರಿಗೆ ಮುಕ್ತಾಯ ಪ್ರಮಾಣ ಪತ್ರದ ದಾಖಲಾತಿಗಳೊಂದಿಗೆ 1) ಇಂಡೆಮ್ನಿನಿಟಿ ಬಾಂಡ, 2) ರೀಲಿಂಕಿಶ್ ಡೀಡ 3) ಮುಚ್ಚಳಿಕೆ ಪತ್ರ, 4) ಹೆಸ್ಕಾಂ ಇವರ ಪತ್ರ, 5) ಅಭಿವೃದ್ಧಿ ಕಾಮಗಾರಿಗಳನ್ನು ಗುರುತಿಸಿರುವ ನಕ್ಷೆಗಳು 5 ಪ್ರತಿಗಳಲ್ಲಿ ಇತ್ಯಾದಿಗಳನ್ನು ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ. ಪ್ರಾಧಿಕಾರದ ಅಧಿನಿಯಮ ಉಪಬಂಧ 30 ರನ್ವಯ ಸದರಿ ವಸತಿ ಉದ್ದೇಶದ ವಿನ್ಯಾಸವನ್ನು ಮಹಾನಗರ ಪಾಲಿಕೆಗೆ ಹಸ್ತಾಂತರಿಸಿಕೊಳ್ಳಲು ಶಿಫಾರಸ್ಸು ಮಾಡಲಾಗಿದೆ.
2. ಶ್ರೀ ಜಹಾಂಗೀರ ನೋಹಾ ಶೇಖ, ಮಿಡ್ ಮ್ಯಾಕ ಡೆವಲಪರ್ಸ್, ಜಿ ಮುಪ್ಪಣ್ಣ ಕಾಂಪ್ಲೇಕ್ಸ್, 1ನೇ ಮಹಡಿ, ಹುಬ್ಬಳ್ಳಿ ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಪ್ರಾಧಿಕಾರದ ಯೋಜನಾ ವಿಭಾಗಕ್ಕೆ.
4. ಹೆಚ್ಚಿನ ಪ್ರತಿ.